# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳು ಹಾಗೂ ಪಾನ್ ಮಸಾಲ ಉತ್ಪನ್ನಗಳ ಸೇವನೆ ಮತ್ತು ಉಗುಳುವುದನ್ನು ನಿಷೇಧಿಸುವ ಬಗ್ಗೆ.

**ಓದಲಾಗಿದೆ:** 1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಏಕ ಕಡತ ಸಂಖ್ಯೆ: NHM/NTCP/13/2017-18

2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಭಾರತ ಸರ್ಕಾರ, ಇವರ ಪತ್ರ ಸಂಖ್ಯೆ:Z.21020/19/2020 TC, ದಿನಾಂಕ: 10.04.2020

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಏಕ ಕಡತದಲ್ಲಿ ದೇಶದಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಹಾಗೂ ಪಾನ್ ಮಸಾಲ ಉತ್ಪನ್ನಗಳನ್ನು ಜಗಿದು ಉಗಿಯುವುದರಿಂದ ಕೋವಿಡ್-19 ಹಾಗೂ ಇತರೆ ಸಾಂಕ್ರಾಮಿಕ ರೋಗಗಳು ಇತರರಿಗೆ ಹರಡುವ ಸಂಭವ ಇರುತ್ತದೆಂದು ಉಲ್ಲೇಖಿಸಿರುತ್ತಾರೆ. ಈಗಾಗಲೇ ಬಿಹಾರ, ಜಾರ್ಖಂಡ್ ರಾಜ್ಯಗಳು ಎಲ್ಲಾ ರೀತಿಯ ಜಗಿಯುವ ತಂಬಾಕು, ಪಾನ್ ಮಸಾಲ ಉತ್ಪನ್ನಗಳನ್ನು Epidemics Diseases Act 1897 ಸೆಕ್ಷನ್ (2)ರಡಿಯಲ್ಲಿ ನಿಷೇಧಿಸಿ ಆದೇಶ ಹೊರಡಿಸಿರುತ್ತಾರೆ. ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಹಾಗೂ ವಿಶ್ವ ಆರೋಗ್ಯ ಸಂಸ್ಥೆ ಹಾಗೂ Indian Council and Medical Research (ICMR) ತಿಳಿಸಿರುವಂತೆ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದರಿಂದ ಕೋವಿಡ್-19 ಸೋಂಕು ಇತರರಿಗೆ ಹರಡುವುದನ್ನು ತಪ್ಪಿಸಿ ಪರಿಣಾಮಕಾರಿಯಾಗಿ ಕೋವಿಡ್-19 ಸೋಂಕನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳು ಹಾಗೂ ಪಾನ್ ಮಸಾಲ ಉತ್ಪನ್ನಗಳ ಸೇವನೆ ಮತ್ತು ಉಗುಳುವುದನ್ನು ನಿಷೇಧಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕೋವಿಡ್-19 ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳ ಸೇವನೆ ಮತ್ತು ಉಗಿಯುವುದನ್ನು ನಿಷೇಧಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಎಲ್ಲಾ ರಾಜ್ಯಗಳಿಗೂ ಸೂಚಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 118 ಸಿಜಿಇ 2020,**
**ಬೆಂಗಳೂರು, ದಿನಾಂಕ: 29.05.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧ್ಯಾದೇಶ 2020ರ ಸೆಕ್ಷನ್ 4(2)ಎ ಹಾಗೂ ಭಾರತೀಯ ದಂಡ ಸಂಹಿತೆ 1860ರ ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದರಿಂದ ಕೋವಿಡ್-19 ಹಾಗೂ ಇತರೆ ಸಾಂಕ್ರಾಮಿಕ ರೋಗಗಳು ಇತರರಿಗೆ

ಪು.ತಿ.ನೋ

Scanned with CamScanner

ಹರಡುವುದನ್ನು ತಪ್ಪಿಸಿ ಹಾಗೂ ಪರಿಣಾಮಕಾರಿಯಾಗಿ ಕೋವಿಡ್-19 ಸೋಂಕನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಗಿಯುವ ತಂಬಾಕು ಉತ್ಪನ್ನಗಳು ಹಾಗೂ ಪಾನ್ ಮಸಾಲ ಉತ್ಪನ್ನಗಳ ಸೇವನೆ ಮತ್ತು ಉಗುಳುವುದನ್ನು ನಿಷೇಧಿಸಿದೆ. ಸಾರ್ವಜನಿಕರು ಇದನ್ನು ಉಲ್ಲಂಘಿಸಿದಲ್ಲಿ, ಐ.ಪಿ.ಸಿ ಸೆಕ್ಷನ್ 188, 268, 269 , 270 ಅಡಿಯಲ್ಲಿ ಪ್ರಾಧಿಕೃತ ಅಧಿಕಾರಿಗಳು ಅಗತ್ಯ ಕಾನೂನು ಕ್ರಮವನ್ನು ಕೈಗೊಳ್ಳುವಂತೆ ಸಹ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಪದ್ಮ ವಿ) 29/5/2020
ಸರ್ಕಾರದ ಅಧೀನ ಕಾರ್ಯದರ್ಶಿ.
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1&2)

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು- ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
2. ಆಯುಕ್ತರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು. ಬೆಂಗಳೂರು.
3. ಆಯುಕ್ತರು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು (ಆಯುಕ್ತರು, ಆಕುಕ ಸೇವೆಗಳು ಇವರ ಮುಖಾಂತರ)
5. ನಿರ್ದೇಶಕರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು. ಬೆಂಗಳೂರು
6. ಎಲ್ಲಾ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳು (ಆಯುಕ್ತರ ಆಕುಕ ಸೇವೆಗಳು ಇವರ ಮುಖಾಂತರ)
7. ಎಲ್ಲಾ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು (ಆಯುಕ್ತರ ಆಕುಕ ಸೇವೆಗಳು ಇವರ ಮುಖಾಂತರ)

**ಮಾಹಿತಿಗಾಗಿ:**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ-2, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು

Scanned with CamScanner